**ಕರ್ನಾಟಕ ಸರ್ಕಾರ**

ಸಂಖ್ಯೆ:ಮಿಕಸ್:ಎಎಲ್‌ಎನ್:ಎಸ್‌ಆರ್(ಎಸ್):295/2004-05.

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ: 22-09-2004

**:: ಅಧಿಕೃತ ಜ್ಞಾಪನ ::**

ವಿಷಯ: ಬೆಂಗಳೂರು ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ಬೇಗೂರು ಗ್ರಾಮದ ಸರ್ವೇ ನಂಬರ್.167/1ರಲ್ಲಿ ಒಟ್ಟು 2-00 ಎಕರೆ (ಎರಡು ಎಕರೆ) ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತನೆ ಕೋರಿ ಶ್ರೀ ಬಿ.ಆರ್. ರಾಜಣ್ಣಗೌಡ, ಚಿಕ್ಕಬೇಗೂರು ಗ್ರಾಮ ರವರು ಸಲ್ಲಿಸಿರುವ ಅರ್ಜಿ ದಿನಾಂಕ: 20-07-2004.

ಉಲ್ಲೇಖ: 1) ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರ ವರದಿ ಸಂಖ್ಯೆ:ಎಎಲ್‌ಎನ್:ಎಸ್‌ಆರ್(ಬೇ):33:2004-05, ದಿನಾಂಕ: 21-08-2004.
2) ಭೂ ಪರಿವರ್ತನಾ ಶುಲ್ಕ ರೂ.1,08,900-00 ಹಾಗೂ ಪೋಡಿ ಶುಲ್ಕ ರೂ.55-00, ಒಟ್ಟು ರೂ.1,08,955-00ಗಳನ್ನು ಚಲನ್ ನಂಬರ್.53, ದಿನಾಂಕ: 09-09-2004ರಂದು ಎಸ್.ಬಿ.ಎಂ. ಬೆಂಗಳೂರು ಇಲ್ಲಿ ಅರ್ಜಿದಾರರು ಜಮಾ ಮಾಡಿರುತ್ತಾರೆ.

* * *

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ.95(2), 95(4) ಮತ್ತು 95(7)ರ ಷರತ್ತುಗಳು ಹಾಗೂ ಷರತ್ತುಗೊಳಪಡಿಸಿ, ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994ರ ನಿಯಮ 107(1)ರಂತೆ ಎಕರೆ ಒಂದಕ್ಕೆ ರೂ.54,450-00 (ರೂಪಾಯಿಗಳು ಐವತ್ತು ನಾಲ್ಕು ಸಾವಿರದ ನಾಲ್ಕು ನೂರ ಐವತ್ತು ಮಾತ್ರ) ಗಳಂತೆ ಅರ್ಜಿದಾರರು ಉಲ್ಲೇಖ (2) ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿದ ಮೇರೆಗೆ ಅರ್ಜಿದಾರರಾದ ಶ್ರೀ ಬಿ.ಆರ್. ರಾಜಣ್ಣಗೌಡ, ಚಿಕ್ಕಬೇಗೂರು ಗ್ರಾಮ ರವರ ಅರ್ಜಿಯನ್ನು ಪರಿಗಣಿಸಿ ಬೇಗೂರು ಹೋಬಳಿ, ಬೇಗೂರು ಗ್ರಾಮದ ಸರ್ವೇ ನಂಬರ್.167/1ರಲ್ಲಿ ಒಟ್ಟು 2-00 ಎಕರೆ (ಎರಡು ಎಕರೆ) ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1) ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರಿಯಿಂದ ಅಂದರೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.

2) ಈ ಪರಿವರ್ತಿತ ಜಮೀನನ್ನು ವಾಸದ ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೆ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.

3) ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ರವರಿಂದ ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್ ಪ್ಲಾನಿಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು.

4) ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಖಾಲಿ ಜಾಗ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ರವರಿಂದ ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟ ಪಡಿಸಿದ ನಿಯಮಗಳ ರೀತ್ಯ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

5) ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ನೀರು ಸರಬರಾಜು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನುರೀತ್ಯಾ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

___2)

6) ಈ ಜಮೀನಿಗೆ ಹಾಕು ಪೋಟ್ ಖರಾಬ್ ಜಮೀನಿದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ.67ರಂತೆ ಸರ್ಕಾರದ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು. ಹಾಗೂ ಪ್ರಸ್ತುತ ಭೂ ಪರಿವರ್ತನೆಗೆ ಒಳಪಟ್ಟಿರುವ ಸ.ನಂ.167/1ರಲ್ಲಿ ಒಟ್ಟು "ಬಿ" ಖರಾಬ್ ವಿಸ್ತೀರ್ಣ 0-01 ಗುಂಟೆ ಇದ್ದು, ಇದನ್ನು ಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಿರಿಸಲಾಗಿದೆ. ಈ ವಿಸ್ತೀರ್ಣದ ಮೇಲೆ ಅರ್ಜಿದಾರರಿಗೆ ಯಾವ ಹಕ್ಕು ಇರುವುದಿಲ್ಲ. ಈ ಬಿ ಖರಾಬ್ ವಿಸ್ತೀರ್ಣದ ಹಕ್ಕು ಯಾವಾಗಲೂ ಸರ್ಕಾರಕ್ಕೆ ಸೇರಿರುತ್ತದೆ. ತಹಶೀಲ್ದಾರ್‌ರವರು ಈ ಬಾಬ್ತು ಆರ್.ಟಿ.ಸಿ.ಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.

7) ಭೂ ಪರಿವರ್ತನೆ ಮಂಜೂರಿ ಯಾವ ಉದ್ದೇಶಕ್ಕೆ ಆಗಿರುತ್ತದೆಯೋ ಅದೇ ಉದ್ದೇಶಕ್ಕೆ ಈ ದಿನದಿಂದ ಎರಡು ವರ್ಷಗಳ ಒಳಗಾಗಿ ಉಪಯೋಗಿಸತಕ್ಕದ್ದು.

8) ಸರ್ಕಾರದ ಆದೇಶ ಸಂಖ್ಯೆ:ಪಿಡಬ್ಲ್ಯೂಡಿ:7556-665 ಆರ್ ಮತ್ತು ಬಿ-6-54-5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ನಂ.ಪಿ 1: 7(11)67, ದಿನಾಂಕ: 1.1.1966 ರಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ, ರಸ್ತೆಯ ಮಧ್ಯಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶ ಯಾವುದೇ ಸೂಚನೆ ನೀಡದೆ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964ರ ಕಲಂ.96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.ಅಲ್ಲದೆ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೆ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೇದಾರರಿಂದ ವಸೂಲಿ ಮಾಡಲಾಗುವುದು.

: <u>ಶೆಡ್ಯೂಲ್ ವಿವರ</u> :

ಬೆಂಗಳೂರು ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ಬೇಗೂರು ಗ್ರಾಮದ ಸರ್ವೆ ನಂಬರ್.167/1ರಲ್ಲಿ ಒಟ್ಟು 2-00 ಎಕರೆ (ಎರಡು ಎಕರೆ ವಿಸ್ತೀರ್ಣಕ್ಕೆ ಮಾತ್ರ) ವಿಸ್ತೀರ್ಣಕ್ಕೆ ಭೂ ಪರಿವರ್ತಿತ ಜಮೀನಿಗೆ ಚಕ್ಕುಬಂದಿ:

| | | |
|---|---|---|
| ಪೂರ್ವಕ್ಕೆ | :: | ಸಿಂಗಸಂದ್ರ ಗ್ರಾಮದ ಗಡಿ. |
| ಪಶ್ಚಿಮಕ್ಕೆ | :: | ರಸ್ತೆ ಮತ್ತು ರಿ.ಸನಂ.166. |
| ಉತ್ತರಕ್ಕೆ | :: | ಇದೇ ರಿ.ಸನಂ. ಉಳಿಕೆ ಜಮೀನು. |
| ದಕ್ಷಿಣಕ್ಕೆ | :: | ಲಾಗು ಹಿಸ್ಸಾ ನಂ.167/2. |

ಸಹಿ/-
( ಡಾ: ರಾಮೇಗೌಡ )
ವಿಶೇಷ ಜಿಲ್ಲಾಧಿಕಾರಿ (ಕಂ.)
ಬೆಂಗಳೂರು ಜಿಲ್ಲೆ.

<u>ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಿದೆ:</u>

1) ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ರವರಿಗೆ ಮೂಲ ಕಡತ ಹಾಗೂ ಚಲನ್‌ನೊಂದಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಗಣಕೀಕೃತ ಆರ್.ಟಿ.ಸಿ. ಯಲ್ಲಿ ತಕ್ಷಣ ನಮೂದಿಸತಕ್ಕದ್ದು ಮತ್ತು ಈ ಜಮೀನಿಗೆ ಖಾತೇದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿಮೆಗೊಳಿಸುವುದು.

2) ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ

3) ಉಪ ವಿಭಾಗಾಧಿಕಾರಿಗಳು, ಬೆಂಗಳೂರು ದಕ್ಷಿಣ ಉಪ ವಿಭಾಗ, ಬೆಂಗಳೂರು.

4) ಉಪ ನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉಪ ವಿಭಾಗ.

5) ಅರ್ಜಿದಾರರಾದ ಶ್ರೀ ಬಿ.ಆರ್. ರಾಜಣ್ಣಗೌಡ, ಚಿಕ್ಕಬೇಗೂರು ಗ್ರಾಮ, ಬೇಗೂರು ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು ರವರಿಗೆ ದೃಢೀಕೃತ ಅಂಚೆ ಮೂಲಕ.

6) ಹೆಚ್ಚಿನ ಪ್ರತಿ.

ವಿಶೇಷ ಜಿಲ್ಲಾಧಿಕಾರಿ (ಕಂ.)
ಬೆಂಗಳೂರು ಜಿಲ್ಲೆ.